ನ್ಯಾಯಬೆಲೆ ಅಂಗಡಿಯಲ್ಲಿ ಆಹಾರ ಧಾನ್ಯಗಳನ್ನು ವಿತರಿಸುವುದು

2812 (3223), ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)

ಅ) ಚಿಂತಾಮಣಿ ಕ್ಷೇತ್ರದಲ್ಲಿ ಸರ್ಕಾರ ನಿಗಧಿಪಡಿಸಿರುವ ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದಲ್ಲಿ ಪಡಿತರವನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ತಿಂಗಳಲ್ಲಿ 4 ರಿಂದ 5 ದಿನ ಪಡಿತರ ಹಂಚಿಕೆ ಮಾಡಿ ಉಳಿದ ದಿನ ನ್ಯಾಯಬೆಲೆ ಅಂಗಡಿಗಳು ಮುಚ್ಚಿರುತ್ತಾರೆ, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ನ್ಯಾಯಬೆಲೆ ಅಂಗಡಿಯಲ್ಲಿ ಎಣ್ಣೆ ತೆಗೆದುಕೊಂಡರೆ ಮಾತ್ರ ಅಕ್ಕಿ ಕೊಡಲಾಗುವುದೆಂದು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಕೆಲವು ನ್ಯಾಯಬೆಲೆ ಅಂಗಡಿಯಲ್ಲಿ ರಶೀದಿಗಳನ್ನು ನೀಡುತ್ತಿಲ್ಲ, ಇದರ ಬಗ್ಗೆ ತೆಗೆದುಕೊಂಡ ಕ್ರಮಗಳೇನು (ವಿವರ ನೀಡುವುದು)?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಬಂದಿದೆ.

ಚಿಂತಾಮಣಿ ಕ್ಷೇತ್ರದ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನಿಗಧಿಪಡಿಸಿರುವುದಕ್ಕಿಂತ ಕಡಿಮೆ ಪ್ರಮಾಣದಲ್ಲಿ ಪಡಿತರವನ್ನು ವಿತರಿಸುತ್ತಿರುವುದು ಹಾಗೂ ಇನ್ನಿತರೆ ಲೋಪವೆಸಗಿರುವ 2 ಪ್ರಕರಣಗಳು ಕಂಡುಬಂದಿವೆ.

ಆ) ಮೇಲ್ಕಂಡ 2 ನ್ಯಾಯಬೆಲೆ ಅಂಗಡಿಗಳ ವಿರುದ್ಧ ಕರ್ನಾಟಕ ಅಗತ್ಯ ವಸ್ತುಗಳ (ಸಾ.ವಿ.ಪ.) ನಿಯಂತ್ರಣ ಆದೇಶ 1992ರನ್ವಯ ಕ್ರಮವಹಿಸಲಾಗಿದೆ. ಈ ರೀತಿ ಸಾರ್ವಜನಿಕರಿಗೆ

ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿ ಪಡಿತರ ಖಾತರಿ ಯೋಜನೆಯನ್ನು ಜಾರಿಗೆ ತಂದಿದೆ. ಪ್ರತಿ ತಿಂಗಳ 01ನೇ ತಾರೀಖಿನಿಂದ 10ನೇ ತಾರೀಖಿನವರೆಗೆ ಬೆಳಿಗ್ಗೆ 8.00 ಗಂಟೆಯಿಂದ ರಾತ್ರಿ 8.00 ಗಂಟೆಯವರೆಗೆ (ಮಧ್ಯಾಹ್ನ 1 ರಿಂದ 2 ಗಂಟೆಯವರೆಗೆ ಊಟದ ವಿರಾಮ ಹಾಗೂ ಸಾರ್ವತ್ರಿಕ ರಜಾ ದಿನ ಹೊರತುಪಡಿಸಿ) ಕಡ್ಡಾಯವಾಗಿ ನ್ಯಾಯಬೆಲೆ ಅಂಗಡಿಗಳಲ್ಲಿ ಬಾಗಿಲು ತೆರೆದು ಪಡಿತರ ವಿತರಣೆ ಮಾಡಿಸಲಾಗುತ್ತಿರುತ್ತದೆ. ಈ ನಂತರದ ತಿಂಗಳ 11ನೇ ತಾರೀಖಿನಿಂದ ತಿಂಗಳ ಅಂತ್ಯದವರೆಗೆ ಹಿಂದಿನ ವೇಳಾಪಟ್ಟಿಯಂತೆ ಬೆಳಿಗ್ಗೆ 8.00 ರಿಂದ 12.00 ಹಾಗೂ ಸಂಜೆ 4.00 ರಿಂದ ರಾತ್ರಿ 8.00 ರವರೆಗೆ ಪಡಿತರ ವಿತರಣೆ ಮಾಡಿಸಲಾಗುತ್ತಿರುತ್ತದೆ. ಈ ಆದೇಶವನ್ನು ಉಲ್ಲಂಘಿಸುವ ನ್ಯಾಯಬೆಲೆ ಅಂಗಡಿ ವರ್ತಕರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು.

ಇ) ಬಂದಿರುವುದಿಲ್ಲ.

ಈ) ಚಿಂತಾಮಣಿ ನಗರದಲ್ಲಿನ ನ್ಯಾಯಬೆಲೆ ಅಂಗಡಿ ಸಂಖ್ಯೆ:111 ರಲ್ಲಿ ಕಾರ್ಡ್‌ದಾರರಿಗೆ ರಶೀದಿ ನೀಡದೆ ಇರುವ ಪ್ರಕರಣ ಪತ್ತೆಯಾಗಿದ್ದು, ಈ ನ್ಯಾಯಬೆಲೆ ಅಂಗಡಿ ಪ್ರಾಧಿಕಾರವನ್ನು ಅಮಾನತ್ತುಪಡಿಸಿ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿರುತ್ತದೆ.

ನ್ಯಾಯಬೆಲೆ ಅಂಗಡಿ ಪ್ರಾಧಿಕರಣದವರು ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಪಡಿತರ ಚೀಟಿದಾರರು ಖರೀದಿಸಿದ ಪಡಿತರಕ್ಕೆ ಸಂಬಂಧಿಸಿದಂತೆ ರಶೀದಿಯನ್ನು ಕಡ್ಡಾಯವಾಗಿ ನೀಡುವಂತೆ ಸೂಚಿಸಿರುತ್ತದೆ.